ದೂರವಾಣಿ ಸಂಖ್ಯೆ : 080-22212343
ಫ್ಯಾಕ್ಸ್ ಸಂಖ್ಯೆ : 080-22278803
Website : https://kptcl.karnataka.gov.in

ಇ-ಮೇಲ್ ವಿಳಾಸ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್.) : ಯು40109ಕೆಎ1999ಎಸ್‌ಜಿಸಿ025521
ಕಂಪನಿಯ ಅಧಿಕೃತ ಕಛೇರಿ : ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ. ರಸ್ತೆ, ಬೆಂಗಳೂರು-560 009

ಸಂಖ್ಯೆ: ಕವಿಪ್ರನಿನಿ/ಬಿ21/21946/2021-22

ದಿನಾಂಕ : 25 OCT 2021

## ಸುತ್ತೋಲೆ

ವಿಷಯ: ಜಾಗೃತಿ ಅರಿವು ಸಪ್ತಾಹ 2021 ನ್ನು ಆಚರಿಸುವ ಬಗ್ಗೆ.
Observance of Vigilance Awareness Week, 2021.

ಉಲ್ಲೇಖ:
1. ಸರ್ಕಾರದ ಮುಖ್ಯ ಕಾರ್ಯದರ್ಶಿ ರವರ ಸುತ್ತೋಲೆ ಸಂಖ್ಯೆ:ಸಿಆಸುಇ 82 ಸೇಲೋಯು 2021 ರ ದಿನಾಂಕ 20.09.2021.
2. ಸರ್ಕಾರದ ಜಂಟಿ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಜಾಗೃತ ವಿಭಾಗ), ವಿಕಾಸ ಸೌಧ, ಬೆಂಗಳೂರು ರವರ ಪತ್ರ ಸಂಖ್ಯೆ:ಸಿಆಸುಇ 82 ಸೇಲೋಯು 2021 ರ ದಿನಾಂಕ 22.10.2021 ರ ಸುತ್ತೋಲೆ.

----

ಭ್ರಷ್ಟಾಚಾರದ ವಿರುದ್ಧ ಜಾಗೃತಿ ಮೂಡಿಸಲು ರಾಜ್ಯ ಸರ್ಕಾರದ ಎಲ್ಲಾ ಇಲಾಖೆಗಳು ಒಂದು ಪ್ರತಿಜ್ಞೆಯನ್ನು ಮಾಡುವ ಮುಖೇನ ಜಾಗೃತಿ ಅರಿವು ಸಪ್ತಾಹ-2021 ಅನ್ನು (Vigilance Awareness Week-2021) ದಿನಾಂಕ: 26.10.2021 ರಿಂದ 01.11.2021 ರವರೆಗೆ ಆಚರಿಸಲು ಉಲ್ಲೇಖಿತ ದಿನಾಂಕ 20.09.2021 ರ ಸುತ್ತೋಲೆಯಲ್ಲಿ ಸೂಚಿಸಲಾಗಿದೆ.

ಅದರಂತೆ, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದಲ್ಲಿ ದಿನಾಂಕ 26.10.2021 ರಂದು ಪೂರ್ವಾಹ್ನ 11.00 ಘಂಟೆಗೆ ಪ್ರತಿಜ್ಞಾ ವಚನವನ್ನು ತೆಗೆದುಕೊಳ್ಳುವ ಮೂಲಕ ಈ ಸಪ್ತಾಹವನ್ನು ಪ್ರಾರಂಭಿಸಲಾಗುವುದು. ಆದ್ದರಿಂದ ಕಾವೇರಿ ಭವನದಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಅಧಿಕಾರಿಗಳು ಹಾಗೂ ನೌಕರರು ಕಾವೇರಿ ಭವನದ ನೆಲಮಹಡಿ ಆವರಣದಲ್ಲಿ (portico) ದಿನಾಂಕ 26.10.2021 ರಂದು ಬೆಳಿಗ್ಗೆ 11.00 ಘಂಟೆಗೆ ಹಾಜರಾಗುವಂತೆ ಕೋರಿದೆ.

ಪ್ರತಿಜ್ಞಾ ವಚನವನ್ನು ತೆಗೆದುಕೊಳ್ಳಲು ಹಾಜರಾಗುವ ಎಲ್ಲಾ ಅಧಿಕಾರಿಗಳು/ನೌಕರರು ಕಡ್ಡಾಯವಾಗಿ ಮಾಸ್ಕ್ ಧರಿಸುವುದು ಹಾಗೂ ಪರಸ್ಪರ ಅಂತರವನ್ನು ಕಾಯ್ದುಕೊಂಡು ಕೋವಿಡ್-19 ರ ಮುಂಜಾಗ್ರತಾ ಕ್ರಮವನ್ನು ತೆಗೆದುಕೊಳ್ಳತಕ್ಕದ್ದು.

ನಿರ್ದೇಶಕರು(ಆ ಮತ್ತು ಮಾ.ಸಂ)
ಕವಿಪ್ರನಿನಿ

**ಪ್ರತಿಜ್ಞಾ ಪತ್ರದ ಪ್ರತಿಯನ್ನು ಸುತ್ತೋಲೆಗೆ ಲಗತ್ತಿಸುತ್ತಾ ತಮ್ಮ ವ್ಯಾಪ್ತಿಯಲ್ಲಿ ಅಗತ್ಯಕ್ರಮ ಕೈಗೊಳ್ಳುವಂತೆ ತಿಳಿಸಿದೆ:**

1. ಎಲ್ಲಾ ಮುಖ್ಯ ಇಂಜಿನಿಯರ್(ವಿ), ಪ್ರಸರಣ ವಲಯ/ರಾವಿರಕೇಂದ್ರ, ಕವಿಪ್ರನಿನಿ.
2. ಎಲ್ಲಾ ಅಧೀಕ್ಷಕ ಇಂಜಿನಿಯರ್(ವಿ), ಪ್ರಸರಣ (ಕಾಮಗಾರಿ ಮತ್ತು ನಿರ್ವಹಣೆ/ಆರ್.ಟಿ ವೃತ್ತ, ಕವಿಪ್ರನಿನಿ.
3. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಬೃಹತ್ ಕಾಮಗಾರಿ/ಟಿ.ಎಲ್ ಮತ್ತು ಎಸ್.ಎಸ್/ಆರ್.ಟಿ ವಿಭಾಗ, ಕವಿಪ್ರನಿನಿ.

## ಪ್ರತಿಜ್ಞೆ

ನಮ್ಮ ದೇಶದ ಆರ್ಥಿಕ, ರಾಜಕೀಯ ಮತ್ತು ಸಾಮಾಜಿಕ ಅಭಿವೃದ್ಧಿಗೆ ಭ್ರಷ್ಟಾಚಾರವು ಒಂದು ಪ್ರಮುಖ ಅಡಚಣೆಯಾಗಿದೆಯೆಂದು ನಾನು ನಂಬುತ್ತೇನೆ. ಭ್ರಷ್ಟಾಚಾರವನ್ನು ನಿರ್ಮೂಲನೆ ಮಾಡಲು ಸರ್ಕಾರ, ನಾಗರಿಕರು ಮತ್ತು ಖಾಸಗಿ ವಲಯದ ಎಲ್ಲಾ ಪಾಲುದಾರರು ಒಟ್ಟಾಗಿ ಕೆಲಸ ಮಾಡಬೇಕಾಗುತ್ತದೆಂದು ನಾನು ನಂಬುತ್ತೇನೆ.

ಪ್ರತಿ ನಾಗರಿಕನು ಜಾಗರೂಕನಾಗಿದ್ದು, ಎಲ್ಲಾ ಸಮಯದಲ್ಲೂ ಉನ್ನತ ಗುಣಮಟ್ಟದ ಪ್ರಾಮಾಣಿಕತೆ ಮತ್ತು ನಿಷ್ಠೆಗೆ ಬದ್ಧನಾಗಿರಬೇಕೆಂದು ಹಾಗೂ ಭ್ರಷ್ಟಾಚಾರದ ವಿರುದ್ಧ ಹೋರಾಟವನ್ನು ಬೆಂಬಲಿಸಬೇಕೆಂದು ನಾನು ಅರಿತಿದ್ದೇನೆ.

ಆದ್ದರಿಂದ, ನಾನು ಈ ರೀತಿ ಪ್ರತಿಜ್ಞೆ ಮಾಡುತ್ತೇನೆ :-

- ಜೀವನದ ಎಲ್ಲಾ ಕ್ಷೇತ್ರಗಳಲ್ಲಿ ಪ್ರಾಮಾಣಿಕತೆ ಮತ್ತು ಕಾನೂನಿನ ನಿಯಮಗಳನ್ನು ಅನುಸರಿಸುತ್ತೇನೆ;
- ಲಂಚವನ್ನು ಪಡೆಯುವುದಿಲ್ಲ ಹಾಗೂ ನೀಡುವುದೂ ಇಲ್ಲ;
- ಎಲ್ಲಾ ಕಾರ್ಯಗಳನ್ನು ಪ್ರಾಮಾಣಿಕ ಮತ್ತು ಪಾರದರ್ಶಕ ರೀತಿಯಲ್ಲಿ ನಿರ್ವಹಿಸುತ್ತೇನೆ;
- ಸಾರ್ವಜನಿಕ ಹಿತಾಸಕ್ತಿಯಲ್ಲಿ ಕಾರ್ಯನಿರ್ವಹಿಸುತ್ತೇನೆ;
- ವೈಯಕ್ತಿಕ ನಡವಳಿಕೆಯಲ್ಲಿ ನಿಷ್ಠೆ ಪ್ರದರ್ಶಿಸುವ ಮೂಲಕ ಮಾದರಿಯಾಗಿರುತ್ತೇನೆ;
- ಯಾವುದೇ ಭ್ರಷ್ಟಾಚಾರದ ಘಟನೆಯನ್ನು ಸೂಕ್ತ ಸಂಸ್ಥೆಗೆ ವರದಿ ಮಾಡುತ್ತೇನೆ.

*****